ಮೈಸೂರ ಗೆಜೆಟ್.

ನಂ. 42.] ಸರ್ಕಾರದಿಂದ ಪ್ರಾಮಿಷ್ ಆದ್ದು. [ನಂ. 11.

ಬೆಂಗಳೂರು, ಗುರುವಾರ, ಮಾರ್ಚಿ ತಾ|| 14, ಸ್ಯ 1907.

ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಬೇರೆ ಬೇರೆಯಾಗಿ ಪುಟಸಂಖೆ ಕೊಡಲ್ಪಡುತ್ತ.

ವಿಷಯ ಸೂಚಿಕೆ.

1ನೆ ಭಾಗ—ಮೈಸೂರು ಸೀಮೆಯ ಶ್ರೀಮರ್ಮ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

2ನೆ ಭಾಗ—ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೆ ವ ಇನಾಂ ಸೂಪರ್ಡಿಂಟೆಂಡೆಂಟರು, ರೆವಿನ್ಯೂ ಕಮ್ಮಿಷನರವರು, ಕಲೆಕ್ಟೋಲರವರು, ಪಬ್ಲಿಕ್ವರ್ಕಸ್ ಆಫಿಸರ್ಗಳು, ಫಾರೆಸ್ಟ್ಟು, ರೆಜಿಸ್ಟ್ರೇರ್ಸ ವ ಎಡ್ಯುಕೇರ್ಸ ಇನ್ಸ್ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್ಬೋರ್ಡು ಪ್ರಸಿಡೆಂಟರು ಡಿಸ್ಟ್ರಿಕ್ಟು ವ ಸೆಷ್ಸ ಜಡ್ಜ್ಗಿರು, ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜ್ಗಿರು, ಪೋಲೀಸ್ ಸೂಪರ್ಡಿಂಟೆಂಡೆಂಟರು, ಫಾರೆಸ್ಟ್ಟು ಆಫಿಸರ್ಗಳು ಇವರುಗಳಿಂದ ಕೊಡೋಣಾದ ಇಸ್ತಿಹಾರ್ಗಳು ವಗೈರೆ ಕಾಲಸ್ಥಿತೀ ರಿಪೋರ್ಟುಗಳು; ಪೋಸ್ಟ್ಆಫೀಸ್ ನೋಟಸ್ಗಳು.

3ನೆ ಭಾಗ—ಲೆಜಿಸ್ಲೇಟಿವ್ ರೆಗ್ಯುಲೇರ್ಷಗಳು ಮತ್ತು ಅವುಗಳಂತೆ ಆದ ನಿಬಂಧನೆಗಳು—ಇಲ್ಲಾ.

4ನೆ ಭಾಗ—ಸರ್ಕಾರೀ ಕಾಗದ್ರ ಪತ್ರಗಳು.

I ನೆ ಭಾಗ.

ಮೈಸೂರು ಸೀಮೆಯ ಶ್ರೀಮರ್ಮ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಜನರಲ್ ಮತ್ತು ರೆವಿನ್ಯೂ.

ತಾರೀಖು 21ನೆ ಫೆಬ್ರವರಿ 1907.

ನಂ. 7241—ಸ್ಯಾಸಿಟೆಂ 66—06—31, ಸರ್ವಸ್ತ ಜನರ ತಿಳಿವಳಿಕೆಯ ಬಗ್ಗೆ ಇದರಿಂದ ಪ್ರಸಿದ್ಧಪಡಿಸುವುದೇನಂದರೆ :—ಹಾಸನ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಪ್ರದೇಶಗಳು ಎಪಿಡೆಮಿಕ್ ಡಿಸೀಸಸ್ ರೆಗ್ಯುಲೇರ್ಷ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯ ತಾರೀಖಿನ ನಂಬರ್ 9383—ಮಿಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸಲೇನಿಯಸ್ ಫೈಲ್ 21—96 ಈ ನಂಬರುಗಳ ಇಸ್ತಿಹಾರ್ನಾಮೆಗಳಿಂದ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಾರ್ಥಗಳಿಗಾಗಿ ಪ್ಲೇಗು ತಗುಲಿದ ಪ್ರದೇಶಗಳೆಂದು ಎಣಿಸಲ್ಪಡುವವು.

ಸ್ಥಳ.	ತಾಲ್ಲೂಕು.
ಚೀಕನಹಳ್ಳಿ	ಬೇಲೂರು.
ಗಾನಹಳ್ಳಿ	ಹಾಸನ.